# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 664 |
| ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 20.02.2024 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನಗರಾಭಿವೃದ್ಧಿ ಇಲಾಖೆ ವ್ಯಾಪ್ತಿಗೆ ಬರುವ ನಗರಾಭಿವೃದ್ಧಿ ಪ್ರಾಧಿಕಾರಗಳು ಎಷ್ಟು; | ನಗರಾಭಿವೃದ್ಧಿ ಇಲಾಖೆ ವ್ಯಾಪ್ತಿಗೆ 30 ನಗರಾಭಿವೃದ್ಧಿ ಪ್ರಾಧಿಕಾರಗಳು ಒಳಪಡುತ್ತವೆ (ಬೆಂಗಳೂರು ನಗರ ಮತ್ತು ಗ್ರಾಮಾಂತರ ಹಾಗೂ ರಾಮನಗರ ಹೊರತುಪಡಿಸಿ) |
| ಆ) | ನಗರಾಭಿವೃದ್ಧಿ ಪ್ರಾಧಿಕಾರದಿಂದ ಹಂಚಿಕೆ ಮಾಡಲಾಗುವ ನಿವೇಶನಗಳನ್ನು ಸಾರ್ವಜನಿಕ ಇ-ಹರಾಜು ಪ್ರಕ್ರಿಯೆಯಿಂದ ಸರ್ಕಾರಕ್ಕೆ ಹೆಚ್ಚು ಲಾಭದಾಯಕವಾಗಿದ್ದರೂ ಸಹ ಸದರಿ ಪ್ರಕ್ರಿಯೆಯನ್ನು Manually ಮಾಡುತ್ತಿರುವುದಕ್ಕೆ ಕಾರಣಗಳೇನು; ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆಗುತ್ತಿರುವ ನಷ್ಟ ಎಷ್ಟು; | ದಿನಾಂಕ:13.04.2020ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ದೇಶ ಮತ್ತು ರಾಜ್ಯದಲ್ಲಿ ಕೋವಿಡ್ -19ರ ಪರಿಣಾಮವಾಗಿ ಉಂಟಾಗಿರುವ ಸನ್ನಿವೇಶದಲ್ಲಿ ಆರ್ಥಿಕ ಸಂಪನ್ಮೂಲ ಕ್ರೋಢಿಕರಿಸುವ ಅಗತ್ಯತೆ ಇದ್ದು, ಈ ಹಿನ್ನಲೆಯಲ್ಲಿ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಮೂಲೆ ನಿವೇಶನಗಳು & ಬಿಡಿ ನಿವೇಶನಗಳನ್ನು ಹರಾಜು ಪ್ರಕ್ರಿಯೆ ಮೂಲಕ ವಿಲೇ ಮಾಡಲು ಜೂನ್ ಮಾಹೆಯ ಪ್ರಾರಂಭದಿಂದ ಆದ್ಯತೆ ಮೇಲೆ ಕ್ರಮ ಕೈಗೊಳ್ಳಲು ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ನಿರ್ದೇಶನ ನೀಡುವಂತೆ ಸೂಚಿಸಲಾಗಿರುತ್ತದೆ.<br><br>ಇದೇ ಸಭೆಯಲ್ಲಿ ಒಂದು ವೇಳೆ ಇ-ಹರಾಜು ಪ್ರಕ್ರಿಯೆಗೆ ಅಗತ್ಯ ಸಾರ್ವಜನಿಕ ಭಾಗವಹಿಸುವಿಕೆ ದೊರಕದೇ ಇದ್ದಲ್ಲಿ, ಭೌತಿಕ ಹರಾಜು ಪ್ರಕ್ರಿಯೆ ಕೈಗೊಳ್ಳಲು ಸಹ ಅನುಮತಿ ನೀಡುವಂತೆ ಸೂಚಿಸಲಾಗಿರುತ್ತದೆ.<br><br>ಅದರಂತೆ, ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಮೂಲೆ ನಿವೇಶನ ಮತ್ತು ಬಿಡಿ ನಿವೇಶನಗಳ ಹರಾಜು ಪ್ರಕ್ರಿಯೆಯನ್ನು ಜೂನ್ |

| | | |
|---|---|---|
| | | ಆರಂಭದಿಂದ ಆದ್ಯತೆಯ ಮೇಲೆ ಕೈಗೊಳ್ಳಲು ಕ್ರಮವಹಿಸುವಂತೆ ರಾಜ್ಯ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ (ಬಿಡಿಎ ಹೊರತುಪಡಿಸಿ) ಸರ್ಕಾರದ ಪತ್ರ ಸಂಖ್ಯೆ: ನಅಇ 52 ಬೆಮಪ್ರಾ 2020(ಇ)(ಭಾಗ-1) ದಿನಾಂಕ:15.04.2020 ರಲ್ಲಿ ಸೂಚಿಸಲಾಗಿತ್ತು. ನಂತರ, ಆರ್ಥಿಕ ಇಲಾಖೆಯು ದಿನಾಂಕ:11.08.2020ರಂದು ಈ ಕೆಳಕಂಡಂತೆ ಅಭಿಪ್ರಾಯ ನೀಡಿದ್ದು<br><br>"The proposal has been examined. Finance department concurs to the proposed subject to the condition that manual auction will be done only after no response is received during e-auction and the process of manual auction should be conducted in a transparent way and should be video graphed".<br><br>ಸದರಿ ಅಭಿಪ್ರಾಯದನ್ವಯ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಮೂಲೆ ನಿವೇಶನ ಮತ್ತು ಬಿಡಿ ನಿವೇಶನಗಳ ಹರಾಜು ಮಾಡುವ ಕುರಿತು ಸೂಕ್ತ ಕ್ರಮವಹಿಸುವಂತೆ ಸರ್ಕಾರದ ಪತ್ರ ಸಂಖ್ಯೆ: ನಅಇ 52 ಬೆಮಪ್ರಾ 2020(ಇ-ಆಫೀಸ್) ದಿನಾಂಕ:24.08.2020ರಲ್ಲಿ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ನಿರ್ದೇಶನ ನೀಡಲಾಗಿತ್ತು.<br><br>ತದನಂತರ, ಸರ್ಕಾರದ ಪತ್ರ ಸಂಖ್ಯೆ: ನಅಇ 52 ಬೆಮಪ್ರಾ 2020 (ಭಾಗ-1) (ಇ) ದಿನಾಂಕ:04.03.2023 ರಲ್ಲಿ ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 52 ಬೆಮಪ್ರಾ 2020 (ಭಾಗ-1)(ಇ) ದಿನಾಂಕ:04.01.2024ರಲ್ಲಿ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಮೂಲೆ ನಿವೇಶನ, ಬಿಡಿ ನಿವೇಶನ ಮತ್ತು ವಾಣಿಜ್ಯ ನಿವೇಶನಗಳನ್ನು ಇ-ಪೋರ್ಟಲ್ ಮುಖಾಂತರ ಇ-ಹರಾಜು ಮುಖಾಂತರವೇ ಹಂಚಿಕೆ ಮಾಡಲು ಕ್ರಮವಹಿಸುವಂತೆ ಸೂಚಿಸಲಾಗಿರುತ್ತದೆ. |

| | | |
|---|---|---|
| ಇ) | ಇ-ಹರಾಜು/ಆನ್ ಲೈನ್ ಮೂಲಕವೇ ನಿವೇಶನಗಳನ್ನು ಇ-ಹರಾಜು ಮಾಡಬೇಕೆಂಬ ಆದೇಶ ಇದ್ದರೂ ಸಹ ಯಾವ ಯಾವ ಪ್ರಾಧಿಕಾರಗಳು Manual ಹರಾಜು ಪ್ರಕ್ರಿಯೆಯಲ್ಲಿ ತೊಡಗಿವೆ; ಸರ್ಕಾರದ ಆದೇಶಗಳ ವಿರುದ್ಧವಾಗಿ ನಡೆದುಕೊಂಡ ಪ್ರಾಧಿಕಾರದ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮವೇನು? | ಪ್ರಸ್ತುತ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಲಭ್ಯವಿರುವ ಮೂಲೆ ನಿವೇಶನ, ಬಿಡಿ ನಿವೇಶನ ಮತ್ತು ವಾಣಿಜ್ಯ ನಿವೇಶನಗಳನ್ನು ಇ-ಪೋರ್ಟಲ್ ಮುಖಾಂತರ ಇ-ಹರಾಜು ಮುಖಾಂತರವೇ ಹಂಚಿಕೆ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಪೈಕಿ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ಹೊರತುಪಡಿಸಿ ಯಾವುದೇ ಪ್ರಾಧಿಕಾರದಲ್ಲಿ ಮ್ಯಾನುವಲ್ ಹರಾಜು ನಡೆಸಿರುವುದಿಲ್ಲ.<br><br>ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರವು ಸರ್ಕಾರದ ನಿರ್ದೇಶನಗಳಂತೆ ಕ್ರಮವಹಿಸದೇ ಮ್ಯಾನುವಲ್ ಹರಾಜು ಪ್ರಕ್ರಿಯೆಯಲ್ಲಿ ನಿಯಮಬಾಹಿರವಾಗಿ ನಿವೇಶನ ಮಾರಾಟ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಹಿಂದಿನ ಆಯುಕ್ತರು, ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ಇವರ ವಿರುದ್ಧ ತನಿಖೆ ಕೈಗೊಳ್ಳಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಸಂಖ್ಯೆ:ಸಿಆಸುಇ 68 ಕೆಇವಿ 2023 ದಿನಾಂಕ:28.08.2023ರಲ್ಲಿ ಪೋಲಿಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ಪೂರ್ವಾನುಮತಿ ನೀಡಿ ಆದೇಶಿಸಲಾಗಿರುತ್ತದೆ. |

ಕಡತ ಸಂಖ್ಯೆ: ನಅಇ 17 ಎಲ್‌ಸಿಕ್ಯೂ 2024 (ಇ-ಕಡತ)

21/02/2024

**(ಬಿ.ಎಸ್. ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು